**All India Radio: Bangalore**
**National Bulletin In Kannada**
**13.08.2025 19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**13.08.2025 19.35 p.m.**

**<><><><>**

ಮುಖ್ಯಾಂಶಗಳು

- ೭೯ನೇ ಸ್ವಾತಂತ್ರ್ಯ ದಿನಾಚರಣೆಗೆ ಭರದ ಸಿದ್ಧತೆ ದೆಹಲಿಯಲ್ಲಿ ಬಿಗಿ ಭದ್ರತೆ
- ಭಾರತ-ಸಿಂಗಾಪುರ ಸಚಿವರ ೩ನೇ ದುಂಡು ಮೇಜಿನ ಸಭೆ - ಸರ್ಕಾರ ಮತ್ತು ಉದ್ಯಮಗಳ ನಡುವೆ ಸಮನ್ವಯತೆಗೆ ಒತ್ತು
- ದೆಹಲಿ ಸ್ವಾತಂತ್ರ್ಯ ದಿನಾಚರಣೆ ೨೦೦ಕ್ಕೂ ಹೆಚ್ಚು ಗ್ರಾಮ ಪಂಚಾಯಿತಿ ನಾಯಕರು ವಿಶೇಷ ಅತಿಥಿಗಳಾಗಿ ಭಾಗಿ
- ಅಮೃತ ಉದ್ಯಾನದ ವಾರ್ಷಿಕ ಪ್ರದರ್ಶನ ; ನಾಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟನೆ

<><><><>

ಸ್ವಾತಂತ್ರ್ಯ ದಿನದಂದು ಸಂಪೂರ್ಣ ಭದ್ರತೆ ಖಚಿತಪಡಿಸಿಕೊಳ್ಳಲು, ದೆಹಲಿ ಪೊಲೀಸರು ಭದ್ರತಾ ವ್ಯವಸ್ಥೆಗಳನ್ನು ಮಾಡಿದ್ದಾರೆ. ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳಲು ಅರೆಸೈನಿಕ ಪಡೆಗಳು ಮತ್ತು ಕಮಾಂಡೋಗಳು ಸೇರಿದಂತೆ ಸಾವಿರಾರು ಭದ್ರತಾ ಸಿಬ್ಬಂದಿ ನಿಯೋಜಿಸಲಾಗಿದೆ. ಸ್ವಾತಂತ್ರ್ಯ ದಿನಾಚರಣೆಯಲ್ಲಿ ಸಾರ್ವಜನಿಕರು ಭಾಗವಹಿಸಲು ಅನುಕೂಲವಾಗುವಂತೆ ದೆಹಲಿ ಮೆಟ್ರೋ ತನ್ನ ಎಲ್ಲಾ ಮಾರ್ಗಗಳಲ್ಲಿ ಬೆಳಿಗ್ಗೆ ೪ ಗಂಟೆಗೆ ತನ್ನ ಸೇವೆಗಳನ್ನು ಪ್ರಾರಂಭಿಸಲಿದೆ. ಪ್ರಧಾನಿ ನರೇಂದ್ರ ಮೋದಿ ದೆಹಲಿಯ ಐತಿಹಾಸಿಕ ಕೆಂಪು ಕೋಟೆಯಿಂದ ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ರಾಷ್ಟ್ರಧ್ವಜಾರೋಹಣ ಮಾಡಿ ರಾಷ್ಟ್ರವನ್ನುದ್ದೇಶಿಸಿ ಮಾತನಾಡಲಿದ್ದಾರೆ. ೭೯ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಪೂರ್ಣ ಉತ್ಸಾಹ ಮತ್ತು ದೇಶಭಕ್ತಿಯ ಉತ್ಸಾಹದಿಂದ ಆಚರಿಸಲು ದೇಶಾದ್ಯಂತ ಜನರು ಸಜ್ಜಾಗುತ್ತಿದ್ದಾರೆ. ಸ್ವಾತಂತ್ರ್ಯ ದಿನಾಚರಣೆಗೆ ಪೂರ್ವಭಾವಿಯಾಗಿ, ದೇಶಾದ್ಯಂತ ಜನರು ಹರ್ ಘರ್ ತಿರಂಗಾ ಅಭಿಯಾನದಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದ್ದಾರೆ. ಈ ಅಭಿಯಾನದ ಭಾಗವಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ತಮ್ಮ ನಿವಾಸದಲ್ಲಿ ರಾಷ್ಟ್ರಧ್ವಜಾರೋಹಣ ಮಾಡಿದರು.

ಹರ್ ಘರ್ ತಿರಂಗಾ ಅಭಿಯಾನದಡಿ ದೇಶದೆಲ್ಲಡೇ ಕಾರ್ಯಕ್ರಮಗಳು ಜರುಗುತ್ತಿದ್ದು, ಜಮ್ಮು-ಕಾಶ್ಮೀರದ ಕಠುವಾ ಜಿಲ್ಲೆಯಲ್ಲಿ ನಡೆದ ತಿರಂಗಾ ಯಾತ್ರೆಯ ನೇತೃತ್ವವನ್ನು ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ವಹಿಸಿದ್ದರು. ಈ ವೇಳೆ ಅವರು, ಭಗತ್ ಸಿಂಗ್ ರಾಜಗುರು ಮತ್ತು ಸುಖದೇವ್ ಸೇರಿದಂತೆ ಸ್ವಾತಂತ್ರ್ಯ ಹೋರಾಟಗಾರರಿಗೆ ಗೌರವ ನಮನ ಸಲ್ಲಿಸಿದರು. ಜಾರ್ಖಂಡ್‌ನಲ್ಲಿರುವ ತಮ್ಮ ಅಧಿಕೃತ ನಿವಾಸದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣದೇವಿ ಹರ್ ಘರ್ ತಿರಂಗಾ ಅಭಿಯಾನದ ಭಾಗವಾಗಿ ರಾಷ್ಟ್ರ ಧ್ವಜಾರೋಹಣ ಮಾಡಿದರು. ದೆಹಲಿ ಸಚಿವ ಆಶಿಶ್ ಸೂದ್ ಮತ್ತು ಬಿಜೆಪಿ ಸಂಸದ ಕಮಲ್‌ಜೀತ್ ಸೆಹ್ರಾವತ್ ದೆಹಲಿಯ ನೈಋತ್ಯ ಜಿಲ್ಲೆಯಲ್ಲಿ ನಡೆದ ತಿರಂಗಾ ಯಾತ್ರೆಯ ನೇತೃತ್ವ ವಹಿಸಿದ್ದು, ಎಂಟು ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು.

<><><>

ಭಾರತ-ಸಿಂಗಾಪುರ ಸಚಿವರ ದುಂಡುಮೇಜಿನ ೩ನೇ ಸುತ್ತಿನ ಸಭೆ ನವದೆಹಲಿಯಲ್ಲಿ ಇಂದು ನಡೆಯಿತು. ಕೇಂದ್ರ ಸಚಿವರಾದ ಡಾ. ಎಸ್.ಜೈಶಂಕರ್, ಅಶ್ವಿನಿ ವೈಷ್ಣವ್ ಮತ್ತು ಪಿಯೂಷ್ ಗೋಯಲ್ ಅವರೊಂದಿಗೆ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭಾರತೀಯ ನಿಯೋಗದ ನೇತೃತ್ವ ವಹಿಸಿದ್ದರು. ಸಿಂಗಾಪುರದ ನಿಯೋಗದ ನೇತೃತ್ವವನ್ನು ಸಿಂಗಾಪುರ ಉಪ ಪ್ರಧಾನಿ ಗ್ಯಾನ್ ಕಿಮ್ ಯೋಂಗ್ ವಹಿಸಿದ್ದರು. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಭಾರತ-ಸಿಂಗಾಪುರ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಬದ್ಧತೆಗಾಗಿ ಸಭೆಯಲ್ಲಿ ಪಾಲ್ಗೊಂಡಿದ್ದ ಉಭಯ ನಿಯೋಗಗಳಿಗೆ ಧನ್ಯವಾದ ತಿಳಿಸಿದರು. ಭಾರತ-ಸಿಂಗಾಪುರ ವ್ಯಾಪಾರ ದುಂಡು ಮೇಜಿನ ನಿಯೋಗದೊಂದಿಗೆ ಸಚಿವರ ನಿಯೋಗ ಫಲಪ್ರದ ಚರ್ಚೆಗಳನ್ನು ನಡೆಸಿದೆ. ಉಭಯ ರಾಷ್ಟ್ರಗಳ ನಡುವಿನ ಸಂಬಂಧಗಳನ್ನು ಮುಂದಿನ ಹಂತಕ್ಕೆ ಕೊಂಡೊಯ್ಯಲು ಸರ್ಕಾರಗಳು ಮತ್ತು ಉದ್ಯಮಗಳ ನಡುವೆ ಹೆಚ್ಚಿನ ಸಮನ್ವಯತೆ ನಿರ್ಣಾಯಕವಾಗಿದೆ ಎಂದರು. ಪ್ರಧಾನಿ ನರೇಂದ್ರ ಮೋದಿ ಅವರ ೨೦೨೪ರ ಸಿಂಗಾಪುರ ಭೇಟಿಯ ವೇಳೆ ಉಭಯ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ಸಂಬಂಧವನ್ನು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯಾಗಿ ಉನ್ನತೀಕರಿಸಲಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವೆ ನಿರ್ಮಲಾ ಸೀತಾರಾಮನ್ ನೆನಪಿಸಿಕೊಂಡಿದ್ದಾರೆ.

<><><>

ಆಗಸ್ಟ್ ೧೫ ರಂದು ನವದೆಹಲಿಯಲ್ಲಿ ನಡೆಯಲಿರುವ ಸ್ವಾತಂತ್ರ್ಯ ದಿನಾಚರಣೆಯಲ್ಲಿ ೨೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಗ್ರಾಮ ಪಂಚಾಯತಿಗಳ ೨೧೦ ನಾಯಕರು ವಿಶೇಷ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಈ ವರ್ಷದ ವಿಶೇಷ ಅತಿಥಿಗಳಲ್ಲಿ ಗಮನಾರ್ಹ ಸಂಖ್ಯೆಯ ಮಹಿಳಾ ನಾಯಕರು ಸೇರಿದ್ದಾರೆ. ಅವರು ತಮ್ಮ ಗ್ರಾಮ ಪಂಚಾಯತ್‌ಗಳಲ್ಲಿ ಉತ್ತಮ ಮೂಲಸೌಕರ್ಯ, ವರ್ಧಿತ ಸಾರ್ವಜನಿಕ ಸೇವೆಗಳು ಮತ್ತು ಎಲ್ಲರನ್ನೂ ಒಳಗೊಂಡ ಸಮುದಾಯ ಉಪಕ್ರಮಗಳಂತಹ ಸುಧಾರಣೆಗಳನ್ನು ತಂದಿದ್ದಾರೆ. ಈ ವಿಶೇಷ ಅತಿಥಿಗಳು ಹರ್ ಘರ್ ಜಲ ಯೋಜನೆ, ಪ್ರಧಾನ ಮಂತ್ರಿ ಆವಾಸ್ ಯೋಜನೆ ಮತ್ತು ಮಿಷನ್ ಇಂದ್ರಧನುಷ್ ನಂತಹ ಪ್ರಮುಖ ಸರ್ಕಾರಿ ಯೋಜನೆಗಳನ್ನು ಪೂರೈಸುವಲ್ಲಿ ಗಮನಾರ್ಹ ಯಶಸ್ಸನ್ನು ಸಾಧಿಸಿದ್ದಾರೆ. ಈ ವಿಶೇಷ ಅತಿಥಿಗಳಿಗೆ ಔಪಚಾರಿಕ ಸನ್ಮಾನ ಕಾರ್ಯಕ್ರಮವನ್ನು ನಾಳೆ ನವದೆಹಲಿಯಲ್ಲಿ ನಡೆಸಲಾಗುವುದು ಎಂದು ಪಂಚಾಯತ್ ರಾಜ್ ಸಚಿವಾಲಯ ತಿಳಿಸಿದೆ.

<><><><>

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಮಧ್ಯ ಆಫ್ರಿಕಾದ ವಿದೇಶಾಂಗ ಸಚಿವೆ ಸಿಲ್ವಿ ಬೈಪೋ ಟೆಮನ್ ಮತ್ತು ಮಧ್ಯ ಆಫ್ರಿಕಾದ ಜನರಿಗೆ ಇಂದು ಸ್ವಾತಂತ್ರ್ಯ ದಿನಾಚರಣೆಯ ಶುಭಾಶಯಗಳನ್ನು ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಮ್ಮ ಶುಭಾಶಯಗಳನ್ನು ವ್ಯಕ್ತಪಡಿಸಿದ ಡಾ. ಜೈಶಂಕರ್, ಭಾರತೀಯ ಶಾಂತಿಪಾಲಕರು ಮಧ್ಯ ಆಫ್ರಿಕಾ ಗಣರಾಜ್ಯದಲ್ಲಿ ವಿಶ್ವಸಂಸ್ಥೆಯ ಬಹುಆಯಾಮದ ಸಂಯೋಜಿತ ಸ್ಥಿರೀಕರಣ ಕಾರ್ಯಾಚರಣೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ ಎಂದು ಹೇಳಿದ್ದಾರೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ನಾಳೆ ರಾಷ್ಟ್ರಪತಿ ಭವನದಲ್ಲಿ ಅಮೃತ್ ಉದ್ಯಾನ ವನದ ವಾರ್ಷಿಕ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಬರುವ ಶನಿವಾರ ಬೆಳಿಗ್ಗೆ ೧೦ ರಿಂದ ಸಂಜೆ ೬ ರವರೆಗೆ ಇದು ಸಾರ್ವಜನಿಕರಿಗೆ ತೆರೆದಿರಲಿದ್ದು, ಸೆಪ್ಟೆಂಬರ್ ೧೪ ರವರೆಗೆ ಮುಂದುವರಿಯುತ್ತದೆ. ರಾಷ್ಟ್ರೀಯ ಕ್ರೀಡಾ ದಿನವಾದ ಇದೇ ೨೯ ರಂದು ಕ್ರೀಡಾಪಟುಗಳಿಗೆ ಹಾಗೂ ಸೆಪ್ಟೆಂಬರ್ ೫ ರ ಶಿಕ್ಷಕರ ದಿನದಂದು ಶಿಕ್ಷಕರಿಗೆ ಅಮೃತ್ ಉದ್ಯಾನಕ್ಕೆ ವಿಶೇಷ ಪ್ರವೇಶದ ವ್ಯವಸ್ಥೆ ಮಾಡಲಾಗಿದೆ. ಪ್ರದರ್ಶನದಲ್ಲಿ ಈ ಬಾರಿ ಬಾಲ ವಾಟಿಕ, ಹರ್ಬಲ್, ಬೋನ್ಸಾಯ್ ಉದ್ಯಾನ, ಸೆಂಟ್ರಲ್ ಲಾನ್, ಲಾಂಗ್ ಗಾರ್ಡನ್ ಮತ್ತು ಸರ್ಕ್ಯುಲರ್ ಉದ್ಯಾನ ಸೇರಿದಂತೆ ವಿಶೇಷ ರೀತಿಯ ವಿಷಯಾಧಾರಿತ

ಉದ್ಯಾನವನಗಳು ಸೇರಿವೆ. ಸಾರ್ವಜನಿಕರಿಗೆ ಅಮೃತ್ ಉದ್ಯಾನಕ್ಕೆ ಉಚಿತ ಪ್ರವೇಶವಿರಲಿದ್ದು, ಉದ್ಯಾನ ನಿರ್ವಹಣೆಗಾಗಿ ಎಲ್ಲಾ ಸೋಮವಾರ ಉದ್ಯಾನವನಕ್ಕೆ ಪ್ರವೇಶವಿರುವುದಿಲ್ಲ.

<><><><>

ರಾಜಸ್ಥಾನದ ದೌಸಾ ಜಿಲ್ಲೆಯಲ್ಲಿ ಇಂದು ಸಂಭವಿಸಿದ ಅಪಘಾತದಲ್ಲಿ ಹತ್ತು ಮಂದಿ ಸಾವನ್ನಪ್ಪಿದ್ದು, ೧೧ ಜನರು ಗಾಯಗೊಂಡಿದ್ದಾರೆ. ದೌಸಾ-ಮನೋಹರ್‌ಪುರ ಹೆದ್ದಾರಿಯ ಬಸ್ದಿ ಚೌರಾಹಾ ಬಳಿ ಇಂದು ಮುಂಜಾನೆ ಪಿಕಪ್ ವಾಹನ ಮತ್ತು ಟ್ರಕ್ ನಡುವೆ ಮುಖಾಮುಖಿ ಡಿಕ್ಕಿಯಾಗಿ ಈ ಅಪಘಾತ ಸಂಭವಿಸಿದೆ. ತೀವ್ರವಾಗಿ ಗಾಯಗೊಂಡ ಎಂಟು ಜನರನ್ನು ಜೈಪುರದ ಎಸ್‌ಎಂಎಸ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಇತರೆ ಮೂವರು ದೌಸಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಅಪಘಾತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. ಮೃತರ ಹತ್ತಿರದ ಸಂಬಂಧಿಕರಿಗೆ ಪ್ರಧಾನ ಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿ, ಪಿಎಂಎನ್‌ಆರ್‌ಎಫ್‌ನಿಂದ ಎರಡು ಲಕ್ಷ ರೂಪಾಯಿಗಳ ಪರಿಹಾರಧನ ಹಾಗೂ ಗಾಯಾಳುಗಳಿಗೆ ೫೦ ಸಾವಿರ ರೂಪಾಯಿಗಳನ್ನು ನೀಡಲಾಗುವುದು ಎಂದು ಪ್ರಧಾನಿ ತಿಳಿಸಿದ್ದಾರೆ.

<><><><>

ಮಾದಕ ವಸ್ತುಗಳ ಬಳಕೆ ದೇಶದ ಸಾಮಾಜಿಕ ಸಂರಚನೆಯ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ. ಈ ಸಾಮಾಜಿಕ ಪಿಡುಗನ್ನು ದೇಶದಿಂದ ನಿರ್ಮೂಲನೆ ಮಾಡುವ ಅಗತ್ಯವಿದೆ ಎಂದು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವೀರೇಂದ್ರ ಕುಮಾರ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ನಶಾ ಮುಕ್ತ ಭಾರತ ಅಭಿಯಾನದ ೫ನೇ ವಾರ್ಷಿಕೋತ್ಸವದಲ್ಲಿ ಮಾತನಾಡಿದ ಅವರು, ಮಾದಕ ವಸ್ತುಗಳ ಮೇಲಿನ ಅವಲಂಬನೆಯು ವ್ಯಕ್ತಿಯ ಆರೋಗ್ಯದ ಮೇಲೆ ಪರಿಣಾಮ ಬೀರುವುದಲ್ಲದೆ, ಅವರ ಕುಟುಂಬಗಳು ಮತ್ತು ಇಡೀ ಸಮಾಜವನ್ನು ಅಸ್ತವ್ಯಸ್ತಗೊಳಿಸುತ್ತದೆ ಎಂದು ಅವರು ಹೇಳಿದರು.

ಧ್ವನಿ : ಡಾ. ವೀರೇಂದ್ರ ಕುಮಾರ್ (೨೨ ಸೆಕೆಂಡ್‌ಗಳು)

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಇದೇ ತಿಂಗಳ ೩೧ ರಂದು ಆಕಾಶವಾಣಿಯಲ್ಲಿ ಪ್ರಸಾರವಾಗುವ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶದಲ್ಲಿರುವ

ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೋ ಕಾರ್ಯಕ್ರಮದ ೧೨೫ ನೇ ಸಂಚಿಕೆಯಾಗಲಿದೆ. ಜನತೆ ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಕಾರ್ಯಕ್ರಮಕ್ಕಾಗಿ ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ಸಲ್ಲಿಸಬಹುದು.

<><><><>

ಚುನಾವಣಾ ಆಯೋಗದ ವಿರುದ್ಧದ ಮತ ಕಳ್ಳತನ ಆರೋಪ ಮಾಡಿದ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಬಿಜೆಪಿ ಇಂದು ತರಾಟೆಗೆ ತೆಗೆದುಕೊಂಡಿತು. ನವದೆಹಲಿಯಲ್ಲಿ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ಸಂಸದ ಅನುರಾಗ್ ಠಾಕೂರ್, ರಾಹುಲ್ ಗಾಂಧಿ ಚುನಾವಣೆಯಲ್ಲಿ ಸೋತಾಗಲೆಲ್ಲಾ ಎಲೆಕ್ಟ್ರಾನಿಕ್ ಮತ ಯಂತ್ರಗಳನ್ನು ದೂಷಿಸುತ್ತಾರೆ. ಪ್ರತಿ ಸೋಲಿನ ನಂತರವೂ ಕಾಂಗ್ರೆಸ್ ಜವಾಬ್ದಾರಿಯನ್ನು ತೆಗೆದುಕೊಳ್ಳುವ ಬದಲು ನೆಪಗಳನ್ನು ಹುಡುಕಲು ಪ್ರಯತ್ನಿಸುತ್ತದೆ ಎಂದು ಅವರು ಹೇಳಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>